# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1296 |
| ಸದಸ್ಯರ ಹೆಸರು | : | ಡಾ: ಯತೀಂದ್ರ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19.03.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕುರಿ ಮತ್ತು ಮೇಕೆ ಮಾಂಸ ಉತ್ಪಾದನೆ ಹೆಚ್ಚಿಸಿ ಗ್ರಾಹಕರಿಗೆ ಉತ್ಕೃಷ್ಟಗುಣಮಟ್ಟದ ಮಾಂಸ ವಿತರಣೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರ ಪ್ರೋತ್ಸಾಹ ಯೋಜನೆಗಳನ್ನೇನಾದರೂ ಹಮ್ಮಿಕೊಂಡಿದೆಯೇ ; | ಕುರಿ ಮತ್ತು ಮೇಕೆ ಮಾಂಸ ಉತ್ಪಾದನೆ ಹೆಚ್ಚಿಸಲು ಅಂದರೆ, ಕುರಿ ಮತ್ತು ಮೇಕೆಗಳ ಸಂಖ್ಯೆಗಳನ್ನು ಹೆಚ್ಚಿಸಲು ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.<br><br>1. ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಸದಸ್ಯರುಗಳಿಗೆ ಅಮೃತ ಸ್ವಾಭಿಮಾನಿ ಕುರಿಗಾಹಿ ಯೋಜನೆಯಡಿಯಲ್ಲಿ ಶೇ.50 ರಷ್ಟು (ರೂ. 87500/- NCDC ಸಾಲ ಮತ್ತು ಶೇ. 25 ರಷ್ಟು ( ರೂ. 43750/-) ರಾಜ್ಯ ಸರ್ಕಾರ ಸಹಾಯಧನವನ್ನು 20+1 ಕುರಿ / ಮೇಕೆ ಘಟಕ ಸ್ಥಾಪನೆಗೆ ನೀಡಲಾಗುತ್ತಿದೆ.<br>2. ವಿಶೇಷ ಘಟಕ(SCSP) ಮತ್ತು ಗಿರಿಜನ ಉಪಯೋಜನೆ (TSP) ಕುರಿ/ಮೇಕೆಘಟಕ (6+1) ಶೇ 90% ರಷ್ಟು ಸಹಾಯಧನ ನಿಗಮದ ವತಿಯಿಂದ ಒದಗಿಸಲಾಗುವುದು.<br>3. ರೈತರ ಕುರಿ ಮತ್ತು ಮೇಕೆಗಳು ಮರಣ ಹೊಂದಿದ್ದಲ್ಲಿ, ಆರ್ಥಿಕ ನಷ್ಟವನ್ನು ಸರಿದೂಗಿಸಲು ಸತ್ತ ಕುರಿ/ ಮೇಕೆಗಳ ಮಾಲೀಕರಿಗೆ ಅನುಗ್ರಹ ಕೊಡುಗೆ ಯೋಜನೆಯಡಿಯಲ್ಲಿ ಕುರಿ / ಮೇಕೆಗಳಿಗೆ ರೂ.5000/-ಗಳ ಪರಿಹಾರ ಧನ ವಿತರಿಸಲಾಗುತ್ತಿದೆ.<br><br>ಗ್ರಾಹಕರಿಗೆ ಉತ್ಕೃಷ್ಟ ಗುಣಮಟ್ಟದ ಮಾಂಸ ವಿತರಣೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರವು ಪ್ರಸ್ತುತ ಯಾವುದೇ ಯೋಜನೆಯನ್ನು ರೂಪಿಸಿರುವುದಿಲ್ಲ. |

| | | |
|---|---|---|
| ಆ) | ಕುರಿ ಮತ್ತು ಮೇಕೆ ಸಾಕಾಣಿಕೆದಾರರಿಗೆ ಮಾಂಸ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲಾಗಿದೆಯೇ ; | ಕುರಿ ಮತ್ತು ಮೇಕೆಗಳ ಮಾರಾಟದ ವ್ಯವಸ್ಥೆಯನ್ನು APMC ಗಳಿಂದ ಕಲ್ಪಿಸಲಾಗಿದೆ.<br>ಕುರಿ ಮತ್ತು ಮೇಕೆಗಳ ಮಾಂಸ ಮಾರಾಟವನ್ನು ನಗರಾಭಿವೃದ್ಧಿ ಇಲಾಖೆಯಿಂದ ವ್ಯವಸ್ಥೆ ಕಲ್ಪಿಸಲಾಗಿದೆ. |
| ಇ) | ಸರ್ಕಾರವು ಕುರಿ ಮತ್ತು ಮೇಕೆ ಮಾಂಸ ಮಾರಾಟಕ್ಕೆ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ; | ಕುರಿ ಮತ್ತು ಮೇಕೆ ಮಾಂಸ ಮಾರಾಟಕ್ಕೆ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಮತ್ತು ನಗರಾಡಳಿತ ಸ್ಥಳೀಯ ಸಂಸ್ಥೆಗಳ ಸಹಯೋಗದೊಂದಿಗೆ ಯೋಜನೆ ರೂಪಿಸುವ ಉದ್ದೇಶ ಹೊಂದಲಾಗಿದೆ. |
| ಈ) | ವಿದೇಶಗಳಿಗೆ ಹಾಗೂ ಹೊರ ರಾಜ್ಯಗಳಿಗೆ ದೇಶಿ ತಳಿ ಕುರಿ ಮತ್ತು ಮೇಕೆ ಮಾಂಸ ರಫ್ತು ಮಾಡಲು ಸರ್ಕಾರ ಕ್ರಮವಹಿಸಿದೆಯೇ; ವಹಿಸಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು ? | ದೇಶಿ ತಳಿ ಕುರಿ ಮತ್ತು ಮೇಕೆ ಮಾಂಸಕ್ಕೆ ರಾಜ್ಯದಲ್ಲಿಯೇ ಹೆಚ್ಚು ಬೇಡಿಕೆ ಇರುತ್ತದೆ. ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಚೀಲನಹಳ್ಳಿಯಲ್ಲಿ ಪ್ರತಿದಿನ 1000 ರಿಂದ 1500 ಕುರಿ ಮತ್ತು ಮೇಕೆ ವಧೆ ಮಾಡುವ ಸಾಮರ್ಥ್ಯದ ಮತ್ತು ಮಂಡ್ಯ ಜಿಲ್ಲೆಯಲ್ಲಿ 200 ರಿಂದ 300 ಕುರಿ ಮತ್ತು ಮೇಕೆ ವಧೆ ಮಾಡುವ ಸಾಮರ್ಥ್ಯದ ಮತ್ತು ಕೋಲಾರ ಜಿಲ್ಲೆಯಲ್ಲಿ 200 ರಿಂದ 300 ಕುರಿ ಮತ್ತು ಮೇಕೆ ವಧೆ ಮಾಡುವ ಸಾಮರ್ಥ್ಯದ ಮಾಂಸ ಸಂಸ್ಕರಣೆ ಘಟಕಗಳು ಪ್ರಾರಂಭವಾಗುವ ಹಂತದಲ್ಲಿದ್ದು, ಈ ಘಟಕಗಳಿಂದ ಉತ್ಪಾದನೆಯಾದ ಮಾಂಸ ಸ್ಥಳೀಯ ಬೇಡಿಕೆ ಪೂರೈಸಿದ ನಂತರ ವಿದೇಶಗಳಿಗೆ ಹಾಗೂ ಹೊರ ರಾಜ್ಯಗಳಿಗೆ ರಫ್ತು ಮಾಡುವ ಕುರಿತು ಯೋಜನೆ ರೂಪಿಸಲಾಗುವುದು. |

**ಸಂಖ್ಯೆ:ಪಸಂಮೀ 98 ಸಲೆವಿ 2025**

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು